Akashvani : Bangalore
National Bulletin In Kannada
07.09.2024 : 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
07.09.2024 : 13.10hrs
****

ಮುಖ್ಯಾಂಶಗಳು:

1. ಉತ್ತರಪ್ರದೇಶದ ಗೋರಖ್‌ಪುರ್‌ನಲ್ಲಿ ಉಪರಾಷ್ಟ್ರಪತಿ ಅವರಿಂದ ಸೈನಿಕ ಶಾಲೆ ಉದ್ಘಾಟನೆ.
2. ದೇಶಾದ್ಯಂತ ಇಂದು ಗಣೇಶ ಚತುರ್ಥಿ; ಜನತೆಗೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಶುಭಾಶಯ
3. ಹರಿಯಾಣ ರಾಜ್ಯ ವಿಧಾನಸಭಾ ಚುನಾವಣೆ; ಕಾಂಗ್ರೆಸ್‌ನಿಂದ ೩೧ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ
4. ದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಭಾರತೀಯ ಪ್ಯಾರಾಒಲಿಂಪಿಯನ್‌ಗಳಿಗೆ ಭವ್ಯ ಸ್ವಾಗತ

******

ಉಪರಾಷ್ಟ್ರಪತಿ ಜಗದೀಪ್ ಧನಕರ್ ಅವರು ಇಂದು ಉತ್ತರ ಪ್ರದೇಶದ ಗೋರಖ್‌ಪುರದಲ್ಲಿ ಸೈನಿಕ ಶಾಲೆಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಉದ್ಘಾಟನಾ ಕಾರ್ಯಕ್ರಮ ಪ್ರಗತಿಯಲ್ಲಿದೆ.ನಂತರ ಉಪರಾಷ್ಟ್ರಪತಿಗಳು, ಚಿತ್ರಕೂಟದಲ್ಲಿರುವ ಜಗದ್ಗುರು ರಾಮಭದ್ರಾಚಾರ್ಯ ದಿವ್ಯಾಂಗ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಿರುವ 'ಆಧುನಿಕ ಜೀವನದಲ್ಲಿ ಋಷಿ ಸಂಪ್ರದಾಯ' ಎಂಬ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಮುಖ್ಯ ಅತಿಥಿಯಾಗಿ ಅಧ್ಯಕ್ಷತೆ ವಹಿಸಲಿದ್ದಾರೆ. ಬಳಿಕ, ಉಪರಾಷ್ಟ್ರಪತಿಗಳು ಮಧ್ಯಪ್ರದೇಶದ ಸತ್ನಾದಲ್ಲಿ ದೀನದಯಾಳ್ ಸಂಶೋಧನಾ ಸಂಸ್ಥೆಯಲ್ಲಿ ನಾನಾಜಿ ದೇಶಮುಖ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಿದ್ದಾರೆ.

******

ಗಣೇಶ ಚತುರ್ಥಿ ಹಬ್ಬವನ್ನು ದೇಶಾದ್ಯಂತ ಇಂದು ಶ್ರದ್ಧಾ ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಈ ದಿನವು ಜ್ಞಾನ, ಸಮೃದ್ಧಿ ಹಾಗೂ ಅದೃಷ್ಟದ ಸಂಕೇತವಾದ ಭಗವಾನ್ ವಿನಾಯಕನ ಜನ್ಮವನ್ನು ಸೂಚಿಸುತ್ತದೆ. ವಿನಾಯಕ ಚತುರ್ಥಿ ಅಥವಾ ಗಣೇಶ ಉತ್ಸವ ಎಂದೂ ಕರೆಯಲ್ಪಡುವ ಈ ದಿನ ಹತ್ತು ದಿನಗಳ ಕಾಲ ನಡೆಯುವ ಉತ್ಸವದ ಆರಂಭವನ್ನು ಸೂಚಿಸುತ್ತದೆ, ಈ ಸಮಯದಲ್ಲಿ ಜನರು ತಮ್ಮ ಮನೆಗಳಲ್ಲಿ ಮಣ್ಣಿನ ಗಣೇಶ ಮೂರ್ತಿಗಳನ್ನು ಇಟ್ಟು ಪೂಜಿಸುತ್ತಾರೆ.ಗಣೇಶನ ಮೂರ್ತಿಗಳ ವಿಸರ್ಜನೆಯ ಭವ್ಯವಾದ ಕಾರ್ಯಕ್ರಮದೊಂದಿಗೆ ಉತ್ಸವ ಮುಕ್ತಾಯಗೊಳ್ಳುತ್ತದೆ. ಅಂದು ಗಣೇಶನ ಮಣ್ಣಿನ ವಿಗ್ರಹಗಳನ್ನು ಜಲಮೂಲಗಳಲ್ಲಿ ವಿಸರ್ಜಿಸಲಾಗುತ್ತದೆ. ಇದು ಸೃಷ್ಟಿ ಹಾಗೂ ವಿಸರ್ಜನೆಯ ಚಕ್ರವನ್ನು ಸಂಕೇತಿಸುತ್ತದೆ. ಭಜನೆಗಳು ಹಾಗೂ ನೃತ್ಯಗಳ ಜೊತೆಯಲ್ಲಿ ಗಣೇಶ ಮೂರ್ತಿಗಳನ್ನು ಮನೆ ಹಾಗೂ ಪೆಂಡಾಲ್‌ಗಳಿಂದ ನದಿಗಳು, ಕೆರೆಗಳು ಅಥವಾ ಸಮುದ್ರಕ್ಕೆ

ಭವ್ಯವಾದ ಮೆರವಣಿಗೆಯಲ್ಲಿ ಒಯ್ಯಲಾಗುತ್ತದೆ. ಗಣೇಶ ಚತುರ್ಥಿ ಮಹಾರಾಷ್ಟ್ರದ ಪ್ರಮುಖ ಆಕರ್ಷಣೆಯಾಗಿದ್ದು, ಅಲ್ಲಿ ಜನರು ಹಬ್ಬವನ್ನು ಹೆಚ್ಚಿನ ಉತ್ಸಾಹದಿಂದ ಆಚರಿಸುತ್ತಾರೆ.

******

ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನಕರ್ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ಗಣೇಶ ಚತುರ್ಥಿಯ ಸಂದರ್ಭದಲ್ಲಿ ದೇಶದ ಜನತೆಗೆ ಶುಭಾಶಯ ಕೋರಿದ್ದಾರೆ. ಸಂತೋಷ ಮತ್ತು ಉತ್ಸಾಹದ ಈ ಹಬ್ಬವು ಸಾಮಾಜಿಕ ಸಾಮರಸ್ಯ ಮತ್ತು ಸಹೋದರತ್ವದ ಸಂದೇಶವನ್ನು ನೀಡುತ್ತದೆ ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ಹೇಳಿದ್ದಾರೆ. ಗಣೇಶ ಜ್ಞಾನ, ಬುದ್ಧಿವಂತಿಕೆ ಹಾಗೂ ಸಮೃದ್ಧಿಯ ಸಂಕೇತವಾಗಿದ್ದು, ಈ ಹಬ್ಬವು ವಿನಮ್ರ ಹಾಗೂ ಕರ್ತವ್ಯಶೀಲರಾಗಿರಲು ಪ್ರೇರೇಪಿಸುತ್ತದೆ ಮತ್ತು ಸಾಮಾಜಿಕ ಒಗ್ಗಟ್ಟನ್ನು ಉತ್ತೇಜಿಸುತ್ತದೆ ಎಂದು ರಾಷ್ಟ್ರಪತಿ ತಿಳಿಸಿದ್ದಾರೆ. ಶಾಂತಿಯುತ ಹಾಗೂ ಸಮೃದ್ಧ ಭಾರತವನ್ನು ಸಾಮೂಹಿಕವಾಗಿ ನಿರ್ಮಿಸಲು ಈ ಸಂದರ್ಭದಲ್ಲಿ ಪಣ ತೊಡುವಂತೆ ರಾಷ್ಟ್ರಪತಿಗಳು ಜನತೆಗೆ ಮನವಿ ಮಾಡಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನಕರ್ ತಮ್ಮ ಸಂದೇಶದಲ್ಲಿ, ಬುದ್ಧಿವಂತಿಕೆ, ಸಮೃದ್ಧಿ ಹಾಗೂ ಅದೃಷ್ಟದ ಸಾಕಾರ ಮೂರ್ತಿಯಾದ ಗಣೇಶ ಕೋಟ್ಯಾಂತರ ಜನರ ಹೃದಯದಲ್ಲಿ ವಿಶೇಷ ಸ್ಥಾನ ಪಡೆದಿದ್ದಾನೆ. ವಿಘ್ನವಿನಾಶಕನಾದ ಗಣೇಶನು ಧೈರ್ಯ, ಸಂಕಲ್ಪ ಹಾಗೂ ಸ್ಥೈರ್ಯದಿಂದ ಸವಾಲುಗಳನ್ನು ಜಯಿಸಲು ಪ್ರೇರೇಪಿಸುತ್ತಾನೆ ಎಂದು ಹೇಳಿದ್ದಾರೆ. ನಮ್ಮ ಸಾಮೂಹಿಕ ಪ್ರಯತ್ನದಲ್ಲಿ ಅಡೆತಡೆಗಳನ್ನು ನಿವಾರಿಸಲು ಗಣೇಶ ಹಬ್ಬದ ಈ ಸಂದರ್ಭದಲ್ಲಿ ಏಕತೆ, ಸಹೋದರತ್ವ ಹಾಗೂ ಬದ್ಧತೆಯ ಮನೋಭಾವ ಅಳವಡಿಸಿಕೊಳ್ಳುವಂತೆ ಉಪರಾಷ್ಟ್ರಪತಿಗಳು ದೇಶವಾಸಿಗಳನ್ನು ಕೋರಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ, ದೇಶದ ಎಲ್ಲ ಜನತೆಗೆ ಗಣೇಶ ಚತುರ್ಥಿಯ ಹೃತ್ಪೂರ್ವಕ ಶುಭಾಶಯಗಳನ್ನು ತಿಳಿಸಿದ್ದಾರೆ. ಗಣಪತಿ ಬಪ್ಪ ಮೋರಿಯಾ ಎಂಬ ಪವಿತ್ರ ಪ್ರಾರ್ಥನೆಯನ್ನು ಪಠಿಸಿದ್ದಾರೆ.

******

ಬಿಹಾರದ ಎರಡು ದಿನಗಳ ಭೇಟಿಯಲ್ಲಿರುವ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಇಂದು ದರ್ಭಾಂಗ ಹಾಗೂ ಮುಜಾಫರ್‌ಪುರದಲ್ಲಿ ಎರಡು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಉದ್ಘಾಟಿಸಲಿದ್ದಾರೆ. ೫ ಸಾವಿರದ ೪೦೦ಕ್ಕೂ ಹೆಚ್ಚು ಹಾಸಿಗೆಗಳನ್ನು ಹೊಂದಿರುವ ವಿಶ್ವದ ಎರಡನೇ ಅತಿದೊಡ್ಡ ಆಸ್ಪತ್ರೆಯಾಗಿ ನಿರ್ಮಿಸಲಾಗುತ್ತಿರುವ ಪಾಟ್ನಾ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಯ ನಿರ್ಮಾಣ ಕಾಮಗಾರಿಯನ್ನು ಸಚಿವರು ಪರಿಶೀಲಿಸಲಿದ್ದಾರೆ. ಇದಕ್ಕೂ ಮುನ್ನ ಅವರು, ಪಾಟ್ನಾದ ತಖ್ತ್‌ಶ್ರೀಹರಿ ಮಂದಿರ್ ಜೀ ಸಾಹೀಬ್ ಗುರುದ್ವಾರಕ್ಕೆ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಿದರು.

******

ಜಾರ್ಖಂಡ್ ಸರ್ಕಾರ ರಾಜ್ಯದ ವಕೀಲರಿಗೆ ೫ ಲಕ್ಷ ರೂಪಾಯಿ ವೈದ್ಯಕೀಯ ವಿಮೆ ಕಲ್ಪಿಸಲು ನಿರ್ಧರಿಸಿದೆ. ಇದರಿಂದ ರಾಜ್ಯದ ಸುಮಾರು ೩೦ ಸಾವಿರ ವಕೀಲರಿಗೆ ಪ್ರಯೋಜನವಾಗುವ ಸಾಧ್ಯತೆ ಇದೆ. ಮುಖ್ಯಮಂತ್ರಿ ಹೇಮಂತ್ ಸೊರೇನ್ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಈ ಸಂಬಂಧ ನಿರ್ಧಾರ ಕೈಗೊಳ್ಳಲಾಗಿದೆ. ೬೫ ವರ್ಷ ಮೀರಿದ ವಕೀಲರಿಗೆ ಕಲ್ಪಿಸಲಾಗುವ ಪಿಂಚಣಿಯನ್ನು ಸಹ ತಿಂಗಳಿಗೆ ೭ ಸಾವಿರ ರೂಪಾಯಿಗಳಿಂದ ೧೪ ಸಾವಿರ ರೂಪಾಯಿಗೆ ಹೆಚ್ಚಿಸುವ ಪ್ರಸ್ತಾವನೆಗೆ ಸಂಪುಟ ಅನುಮೋದನೆ ನೀಡಿದೆ. ಹೊಸದಾಗಿ ನೋಂದಾಯಿತ ವಕೀಲರಿಗೆ ಪ್ರತಿ ತಿಂಗಳು ೫ ಸಾವಿರ ರೂಪಾಯಿ

ಸ್ಟೈಫಂಡ್ ನೀಡುವ ಪ್ರಸ್ತಾವನೆಗೆ ಸಂಪುಟ ಒಪ್ಪಿಗೆ ನೀಡಿದೆ. ವಕೀಲರ ಕಲ್ಯಾಣ ಯೋಜನೆಯನ್ನು ಜಾರಿಗೊಳಿಸುತ್ತಿರುವ ಏಕೈಕ ರಾಜ್ಯ ಜಾರ್ಖಂಡ್ ಆಗಿದ್ದು, ಇಡೀ ದೇಶಕ್ಕೆ ಮಾದರಿಯಾಗಲಿದೆ ಎಂದು ಅಡ್ವೊಕೇಟ್ ಜನರಲ್ ರಾಜೀವ್ ರಂಜನ್ ಹೇಳಿದ್ದಾರೆ.

******

ಹರಿಯಾಣ ರಾಜ್ಯ ವಿಧಾನಸಭಾ ಚುನಾವಣೆಗೆ ಕಾಂಗ್ರೆಸ್ ೩೧ ಉಮೇದುವಾರರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಪಕ್ಷದ ಹಿರಿಯ ನಾಯಕ ಹಾಗು ಮಾಜಿ ಮುಖ್ಯಮಂತ್ರಿ ಭೂಪಿಂದರ್ ಸಿಂಗ್ ಹೂಡಾ ಅವರು, ಗರ್ಹಿ ಸಂಪ್ಲಾ ಕಿಲೋಯ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಹೊಡೆಲ್ ಕ್ಷೇತ್ರದಿಂದ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಉದಯ್‌ಭಾನ್ ಅವರನ್ನು ಕಣಕ್ಕಿಳಿಸಲಾಗಿದೆ. ನಿನ್ನೆ ಕಾಂಗ್ರೆಸ್ ಸೇರಿದ ಕುಸ್ತಿಪಟು ವಿನೇಶ್ ಪೋಗಟ್ ಅವರಿಗೆ ಜುಲಾನಾ ಕ್ಷೇತ್ರದಿಂದ ಟಿಕೆಟ್ ನೀಡಲಾಗಿದೆ. ರಾಜ್ಯದ ಮಾಜಿ ಸಚಿವೆ ಗೀತಾ ಭುಕ್ಕಲ್, ಜಜ್ಜರ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ರೆವಾರಿ ಕ್ಷೇತ್ರದಿಂದ ಹಾಲಿ ಶಾಸಕ ಚಿರಂಜೀವಿ ರಾವ್ ಅವರಿಗೆ ಮತ್ತೆ ಟಿಕೆಟ್ ನೀಡಲಾಗಿದೆ. ಹರಿಯಾಣ ವಿಧಾನಸಭೆಯ ಎಲ್ಲಾ ೯೦ ಕ್ಷೇತ್ರಗಳಿಗೆ ಅಕ್ಟೋಬರ್ ೫ ರಂದು ಮತದಾನ ನಡೆಯಲಿದೆ.

******

ಜಮ್ಮು ಕಾಶ್ಮೀರದಲ್ಲಿ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಸಲ್ಲಿಸಲಾದ ನಾಮಪತ್ರಗಳ ಪರಿಶೀಲನೆಯ ನಂತರ ೨೬೭ ನಾಮಪತ್ರಗಳನ್ನು ಸ್ವೀಕರಿಸಲಾಗಿದ್ದು, ೬೨ ನಾಮಪತ್ರಗಳನ್ನು ತಿರಸ್ಕರಿಸಲಾಗಿದೆ. ನಿನ್ನೆ ನಾಮಪತ್ರಗಳ ಪರಿಶೀಲನಾ ಕಾರ್ಯ ನಡೆಯಿತು. ಜಮ್ಮು ಮತ್ತು ಕಾಶ್ಮೀರದ ಆರು ಜಿಲ್ಲೆಗಳಲ್ಲಿ ಒಟ್ಟು ೩೭೯ ನಾಮಪತ್ರಗಳನ್ನು ಸ್ವೀಕರಿಸಲಾಗಿದೆ ಎಂದು ನಮ್ಮ ಜಮ್ಮು ಬಾತ್ಮೀದಾರರು ವರದಿ ಮಾಡಿದ್ದಾರೆ. ನಾಮಪತ್ರ ಸಲ್ಲಿಕೆಗೆ ಇದೇ ತಿಂಗಳ ೫ರಂದು ಕೊನೆಯ ದಿನವಾಗಿತ್ತು. ಅಭ್ಯರ್ಥಿಗಳು ಬರುವ ಸೋಮವಾರದ ವರೆಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಈ ಹಂತದ ಮತದಾನ ಇದೇ ತಿಂಗಳ ೨೫ರಂದು ನಡೆಯಲಿದೆ. ಎರಡನೇ ಹಂತದ ಚುನಾವಣೆ ಸಮೀಪಿಸುತ್ತಿದ್ದಂತೆ ಜಮ್ಮು ಮತ್ತು ಕಾಶ್ಮೀರದಾದ್ಯಂತ ರಾಜಕೀಯ ಚಟುವಟಿಕೆಗಳು ತೀವ್ರಗೊಳ್ಳುತ್ತಿದ್ದು, ಪ್ರಚಾರ ಮತ್ತು ರ್‍ಯಾಲಿಗಳು ನಡೆಯುತ್ತಿವೆ.

******

ಇಂದು ಅಂತಾರಾಷ್ಟ್ರೀಯ ರಣಹದ್ದು ಜಾಗೃತಿ ದಿನ. ಅಂತಾರಾಷ್ಟ್ರೀಯ ರಣಹದ್ದು ಜಾಗೃತಿ ದಿನವನ್ನು ಪ್ರತಿ ವರ್ಷ ಸೆಪ್ಟೆಂಬರ್ ತಿಂಗಳ ಮೊದಲ ಶನಿವಾರ ಜಗತ್ತಿನಾದ್ಯಂತ ಆಚರಿಸಲಾಗುತ್ತದೆ. ನಮ್ಮ ಪರಿಸರ ವ್ಯವಸ್ಥೆಗಳಲ್ಲಿ ರಣಹದ್ದುಗಳ ಪ್ರಾಮುಖ್ಯತೆ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ.

******

ದೆಹಲಿಯ ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂದಿಳಿದ ಭಾರತೀಯ ಪ್ಯಾರಾಒಲಿಂಪಿಕ್ ಕ್ರೀಡಾಪಟುಗಳಿಗೆ ಇಂದು ಭವ್ಯಸ್ವಾಗತ ನೀಡಲಾಯಿತು. ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಈವರೆಗೆ ಭಾರತ ೬ ಚಿನ್ನ, ೯ ಬೆಳ್ಳಿ, ಹಾಗೂ ೧೨ ಕಂಚು ಸೇರಿದಂತೆ ೨೭ ಪದಕಗಳನ್ನು ಗೆದ್ದಿದೆ. ಭಾರತದ ಪ್ಯಾರಾ ಒಲಿಂಪಿಯನ್ ಶೂಟರ್ ಹಾಗೂ ಚಿನ್ನದ ಪದಕ ವಿಜೇತೆ ಅವನಿ ಲೇಖರಾ ಭವ್ಯ ಸ್ವಾಗತದಿಂದ ಪುಳಕಿತಗೊಂಡರು. ಕ್ರೀಡಾಕೂಟದಲ್ಲಿ ನಮ್ಮ ಪಯಣ ಉತ್ತಮವಾಗಿತ್ತು, ಈ ಬಾರಿ ಕ್ರೀಡಾಪಟುಗಳು ಹಲವು ಪದಕ ಗೆದ್ದಿದ್ದಾರೆ ಎಂದು

ಅವರು ಹೇಳಿದರು.    ಬೆಳ್ಳಿ ಪದಕ ವಿಜೇತ ಪ್ರಣವ್ ಸೂರ್ಮಾ, ಕಠಿಣ ಪರಿಶ್ರಮಕ್ಕೆ ಪ್ರತಿಫಲ ಸಿಕ್ಕಿದೆ ಎಂದು ಪ್ರತಿಕ್ರಿಯಿಸಿದರು. ಆರ್ಚರ್ ಹಾಗೂ ಕಂಚಿನ ಪದಕ ವಿಜೇತ ರಾಕೇಶ್ ಕುಮಾರ್ ತಮ್ಮ ಗೆಲುವಿನ ಶ್ರೇಯಸ್ಸನ್ನು ತರಬೇತುದಾರರಿಗೆ ನೀಡಿದ್ದು, ಮುಂದಿನ ಪ್ಯಾರಾಲಿಂಪಿಕ್ಸ್‌ನಲ್ಲಿ ಕ್ರೀಡಾಪಟುಗಳು ಕಠಿಣ ಶ್ರಮವಹಿಸಿ, ಇನ್ನೂ ಉತ್ತಮ ಪ್ರದರ್ಶನ ನೀಡಲಿದ್ದಾರೆ ಎಂಬ ಆಶಯ ವ್ಯಕ್ತಪಡಿಸಿದರು.

******

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್ ಕ್ರೀಡಾಕೂಟದ ಪುರುಷರ ಹೈಜಂಪ್ ಟಿ೬೪ ವಿಭಾಗದ ಫೈನಲ್‌ನಲ್ಲಿ ಭಾರತದ ಪ್ರವೀಣ್ ಕುಮಾರ್ ಚಿನ್ನದ ಪದಕ ಗೆದ್ದಿದ್ದಾರೆ. ೨.೦೮ ಮೀಟರ್ ಎತ್ತರ ಜಿಗಿಯುವ ಮೂಲಕ ಅವರು ಹೊಸ ದಾಖಲೆ ಬರೆದಿದ್ದಾರೆ. ಪುರುಷರ ಶಾಟ್‌ಪುಟ್ ಎಫ್-೫೭ ಫೈನಲ್‌ನಲ್ಲಿ ಹೊಕಾಟೊ ಹೊಟೋಜೆ ಸೆಮಾ ಅವರು ಕಂಚಿನ ಪದಕ ಗೆದ್ದಿದ್ದಾರೆ. ಈ ಮೂಲಕ ಭಾರತದ ಪದಕಗಳ ಸಂಖ್ಯೆ ೨೭ಕ್ಕೆ ಏರಿಕೆಯಾಗಿದ್ದು, ೬ ಚಿನ್ನ, ೯ ಬೆಳ್ಳಿ ಮತ್ತು ೧೨ ಕಂಚಿನ ಪದಕಗಳನ್ನು ಇದು ಒಳಗೊಂಡಿದೆ.

******

ಪ್ಯಾರಿಸ್‌ನಲ್ಲಿ ನಡೆದಿರುವ ೨೦೨೪ರ ಪ್ಯಾರಾಲಿಂಪಿಕ್ಸ್‌ನ ಪುರುಷರ ಎಫ್-೫೭ ಶಾಟ್‌ಪುಟ್ ಸ್ಪರ್ಧೆಯಲ್ಲಿ ಕಂಚಿನ ಪದಕ ವಿಜೇತ ಭಾರತದ ಹೊಕಾಟೊ ಹೊಟೊಜೆ ಸೆಮಾ ಅವರನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಪ್ಯಾರಾ ಒಲಿಂಪಿಯನ್ ಸೆಮಾ ಅವರ ಸಾಧನೆಯನ್ನು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಸ್ತಾಪಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಸೆಮಾ ಅವರು, ತಮ್ಮ ಚೊಚ್ಚಲ ಪ್ಯಾರಾಲಿಂಪಿಕ್ಸ್‌ನಲ್ಲಿ ಪದಕವನ್ನು ಗೆದ್ದಿದ್ದು, ಭವಿಷ್ಯದಲ್ಲಿ ಇನ್ನಷ್ಟು ಸಾಧನೆ ಮಾಡಲಿ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಸೆಮಾ ಅವರ ಸಾಧನೆ ದೇಶಕ್ಕೆ ಹೆಮ್ಮೆಯ ಕ್ಷಣವಾಗಿದ್ದು, ಕ್ರೀಡಾಪಟುವಿನ ಸಾಧನೆ ಅಸಾಧಾರಣವಾಗಿದೆ ಎಂದಿದ್ದಾರೆ ಹಾಗೂ ಅವರ ಮುಂದಿನ ಪ್ರಯತ್ನಗಳಿಗೆ ಶುಭ ಹಾರೈಸಿದ್ದಾರೆ.

******

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ಸ್‌ನ ಪುರುಷರ ಎಫ್-೫೭ ಶಾಟ್‌ಪುಟ್ ಸ್ಪರ್ಧೆಯಲ್ಲಿ ಕಂಚಿನ ಪದಕ ವಿಜೇತ ಭಾರತದ ಹೊಕಾಟೊ ಹೊಟೊಜೆ ಸೆಮಾ ಅವರನ್ನು ನಾಗಾಲ್ಯಾಂಡ್ ಮುಖ್ಯಮಂತ್ರಿ ನೆಫಿಯು ರಿಯೊ  ಅಭಿನಂದಿಸಿದ್ದಾರೆ. ೪೦ ವರ್ಷ ವಯಸ್ಸಿನ ಹೊಕಾಟೊ ನಿನ್ನೆ ನಡೆದ ಶಾಟ್‌ಪುಟ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗೆದ್ದ ನಾಗಾಲ್ಯಾಂಡ್‌ನ ಮೊದಲ ಕ್ರೀಡಾಪಟುವಾಗಿದ್ದಾರೆ. ವೃತ್ತಿಜೀವನದ ಅತ್ಯುತ್ತಮ ೧೪.೬೫ ಮೀಟರ್ ದೂರ ಎಸೆಯುವ ಮೂಲಕ ಅವರು ದಾಖಲೆ ನಿರ್ಮಿಸಿದ್ದಾರೆ. ಹೊಕಾಟೊ ಅವರ ಕ್ರೀಡಾ ಪಯಣ ಹಾಗೂ ಮಹೋನ್ನತ ಸಾಧನೆಗೆ ಅವರ ಸಮರ್ಪಣಾ ಮನೋಭಾವ ಕಾರಣವಾಗಿದೆ ಎಂದು ಮುಖ್ಯಮಂತ್ರಿ ರಿಯೊ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಈ ಪ್ಯಾರಾಲಿಂಪಿಕ್ ಕ್ರೀಡಾಪಟು, ನೈಜ ಸ್ಫೂರ್ತಿ ಹಾಗು ಮೇಲ್ಪಂಕ್ತಿಯಾಗಿದ್ದಾರೆ ಎಂದು ಅವರು ಬಣ್ಣಿಸಿದರು. ಅಸ್ಸಾಂ ರೆಜಿಮೆಂಟ್‌ನ ಹವಾಲ್ದಾರ್ ಹೊಕಾಟೊ ೨೦೦೨ರಲ್ಲಿ ನಿಯಂತ್ರಣರೇಖೆಯ ಬಳಿ ನಡೆದ ಕಾರ್ಯಾಚರಣೆಯಲ್ಲಿ ನೆಲಬಾಂಬ್ ಸ್ಫೋಟದಿಂದಾಗಿ ಕಾಲು ಕಳೆದುಕೊಂಡಿದ್ದರು.

***END***